**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.848/2023.</u>**

ಪಿರ್ಯಾದುದಾರರುಃ– ಸೇಂಟ್ ಮಿಲಾಗ್ರೀಸ್ ಕ್ರೆಡಿಟ್ ಸೌಹಾರ್ದ
ಕೋ–ಆಪರೇಟಿವ್ ಸೊಸೈಟಿ ಲಿ., ಶಾಖೆಃ ಮಂಕಿ,
ಪ್ರತಿನಿಧಿಸುವವರು,
ಶ್ರೀ ಅಣ್ಣಪ್ಪ ನಾಯ್ಕ,
ವಯಸ್ಸು ಸುಮಾರು 37 ವರ್ಷ,
ವೃತ್ತಿಃ– ಸಹಾಯಕ,
ತಾಲೂಕುಃ– ಹೊನ್ನಾವರ (ಉ.ಕ.).

**–ವಿರುದ್ಧ–**

ಆರೋಪಿಯ ಹೆಸರುಃ– ಗಣಪತಿ ನಾಗಪ್ಪ ನಾಯ್ಕ,
ಸಾಕೀನಃ– ಕುಂಬಾರಕೇರಿ, ಮಾರ್ಕಂಡೇಶ್ವರ,
ಅಂಚೆಃ– ಬಳಕೂರು,
ತಾಲೂಕುಃ– ಹೊನ್ನಾವರ (ಉ.ಕ.).

**<u>ಆಪಾದನೆ</u>**

ಶ್ರೀ ಅನಿಲ್ ಜೋನ್ ಸಿಕ್ವೇರಾ., ಬಿ.ಬಿ.ಎ.,ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯಾದ ನಾನು ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡ ಆಪಾದನೆ ಹೊರಿಸುತ್ತಿದ್ದೇನೆ.

ಆರೋಪಿಯಾದ ನೀವು ಪಿರ್ಯಾದಿಯವರ ಸಂಸ್ಥೆಯಲ್ಲಿ Business Loan ಖಾತೆ ನಂ.ಬಿ.ಎಲ್–1461 ರಡಿಯಲ್ಲಿ ಸಾಲವನ್ನು ಪಡೆದುಕೊಂಡಿದ್ದು ಇರುತ್ತದೆ. ಸದರಿ ಸಾಲಕ್ಕೆ ಸಂಬಂಧಪಟ್ಟಂತೆ ನೀವು ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕೆನರಾ ಬ್ಯಾಂಕ್., ಮುರ್ಡೇಶ್ವರ** ಶಾಖೆಯ ಚೆಕ್ ನಂ.863851 ನ್ನು ದಿನಾಂಕ 15–06–2023 ರಂದು ರೂ. 56,193/– ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿದ್ದು, ಅದರಂತೆ ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ಕೆನರಾ ಬ್ಯಾಂಕ್., ಮಂಕಿ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, 'Funds Insufficient' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 17–06–20243 ರಂದು

ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ. ಈ ಕುರಿತು ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 26-06-2023 ರಂದು ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ ನಿಮಗೆ ದಿನಾಂಕ 05-07-2023 ರಂದು ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ಸಹ ನೀಡದೇ ನೆಗೋಶಿಯೇಬಲ್ ಇನ್ ಸ್ಟ್ರುಮೆಂಟ್ ಕಾಯಿದೆ ಕಲಂ. 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುತ್ತೀರೆಂದು ಆರೋಪಿಸಲಾಗಿದೆ.

ಪ್ರಶ್ನೆ1: ಈಗ ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೇ?

ಆರೋಪಿಯ ಉತ್ತರ: ತಿಳಿಯಿತು

ಪ್ರಶ್ನೆ 2: ಸದ್ರಿ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೇ?

ಆರೋಪಿಯ ಉತ್ತರ : ವಿಚಾರಣೆಯಾಗಬೇಕು

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ )

ಸಹಿ ಇದೆ/-

**ದಿನಾಂಕಃ- 25-06-2025.**

**(ಅನಿಲ್ ಜೋನ್ ಸಿಕ್ವೇರಾ)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.,ಯವರ ನ್ಯಾಯಾಲಯ.,ಹೊನ್ನಾವರ.**

ಆರೋಪಿಯ ಸಹಿಃ- ಸಹಿ ಇದೆ

****